## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 150
2. ಸದಸ್ಯರ ಹೆಸರು : ಶ್ರೀ. ಪ್ರತಾಪ ಸಿಂಹ ನಾಯಕ್ ಕೆ, (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ಸಚಿವರು : ತೋಟಗಾರಿಕೆ ಮತ್ತು ಗಣಿ ಮತ್ತು ಭೂ ವಿಜ್ಞಾನ ಸಚಿವರು
4. ಉತ್ತರಿಸಬೇಕಾದ ದಿನಾಂಕ : 16-07-2024

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ, ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳಿಗೆ ನಿಗಧಿಯಾದ ಬೆಳೆ ವಿಮೆ ಕಂತನ್ನು ಬೆಳೆಗಾರರಿಂದ ಪಡೆದು ಅವರಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಈಗಾಗಲೇ ಕ್ರಮ ವಹಿಸಲಾಗಿದೆಯೇ: ಇಲ್ಲದಿದ್ದಲ್ಲಿ, ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಇದುವರೆಗೂ ಯಾವುದೇ ಕ್ರಮ ಪ್ರಾರಂಭವಾಗದಿರಲು ಕಾರಣಗಳೇನು; | ಹೌದು, ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ 2024-25ನೇ ಸಾಲಿನಲ್ಲಿ ಬೆಳೆ ವಿಮೆ ಅನುಷ್ಠಾನಗೊಳಿಸಲು ಅಡಿಕೆ ಮತ್ತು ಕರಿ ಮೆಣಸು ಬೆಳೆಗಳಿಗೆ ದಿನಾಂಕ: 26-06-2024 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ನೊಂದಣಿಗೆ ಅಂತಿಮ ದಿನಾಂಕ:31.07.2024 ಆಗಿರುತ್ತದೆ. ಕೊಕೋ ಬೆಳೆಗೆ ಹಿಂದಿನಿಂದಲೂ ಬೆಳೆ ವಿಮೆ ಇರುವುದಿಲ್ಲ. |
| ಆ) | ಈ ಹಿಂದೆ ಒಮ್ಮೆ ಬೆಳೆ ವಿಮೆ ಪಡೆದರೆ ಅದು ಮೂರು ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತಿದ್ದು, ಕಳೆದ ವರ್ಷದಿಂದ ಕೇವಲ ಒಂದು ವರ್ಷದ ಅವಧಿಗೆ ಮಾತ್ರ ಅದನ್ನು ಮಿತಿಗೊಳಿಸಲಾಗಿರುವುದರಿಂದ ಸಂಕಷ್ಟದಲ್ಲಿರುವ ಬೆಳೆಗಾರರಿಗೆ ನೆರವಾಗುವ ದೃಷ್ಟಿಯಿಂದ ಈ ಹಿಂದೆ ಇದ್ದಂತೆ ಬೆಳೆವಿಮೆ ಅವಧಿಯನ್ನು 3 ವರ್ಷಗಳಿಗೆ ವಿಸ್ತರಿಸಲು ಸರ್ಕಾರ ಕೂಡಲೇ ಸೂಕ್ತ ಕ್ರಮವಹಿಸುವುದೇ; | ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಟರ್ಮ್ ಶೀಟ್ ಪ್ರಕಾರ ಬೆಳೆ ರಿಸ್ಕ್ ಅವಧಿಯು ಗರಿಷ್ಟ ಒಂದು ವರ್ಷಕ್ಕೆ ಮಾತ್ರ ಇದ್ದು, ಪ್ರತಿ ವರ್ಷ ಬೆಳೆ ವಿಮೆಗೆ ನೊಂದಣಿ ಮಾಡಬೇಕಾಗಿರುತ್ತದೆ. ಪ್ರತಿ ವರ್ಷ ದಂತೆ 2024-25ನೇ ಸಾಲಿನಲ್ಲೂ ಒಂದು ವರ್ಷಕ್ಕೆ ಅಧಿಸೂಚನೆ ಹೊರಡಿಸಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯೊಳಗೆ, ಬೆಳೆಗಾರರಿಂದ ನಿಗದಿಯಾದ ಬೆಳೆ ವಿಮೆ ಕಂತನ್ನು ಪಡೆದು ಅವರಿಗೆ ಹವಾಮಾನ ಆಧಾರಿತ ಬೆಳೆವಿಮೆ ಸೌಲಭ್ಯವನ್ನು ಕಲ್ಪಿಸಲಾಗುವುದೇ? | ಮೇಲಿನಂತೆ ಕ್ರಮಕೈಗೊಳ್ಳಲಾಗಿದೆ. |

HORTI 280 HGM 2024

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

ಎಸ್.ಎಸ್. ಮಲ್ಲಿಕಾರ್ಜುನ್
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು
ಹಾಗೂ ದಾವಣಗೆರೆ ಜಿಲ್ಲೆ ಉಸ್ತುವಾರಿ ಸಚಿವರು